ಮೈಸೂರ ಗೆಜೆಟ್.

ಸಂ. 42.] ಸರ್ಕಾರದಿಂದ ಪ್ರಾಯಿಷ್ ಆದ್ದು. [ನಂ. 40

ಬೆಂಗಳೂರು, ಗುರುವಾರ, ಅಕ್ಟೋಬರ್ ತಾ॥ 3, ಸ॥ 1907.

II ನೆ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು ವಗ್ಯೆರೆರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಾರೆಸ್ಟ್ ಇಲಾಖೆ.

ಸಂದಲ್ ಹರಾಜ್ ನೋಟಿಫಿಕ್ಷೇಷ್ಯ.

ತಾರೀಖು 24ನೆ ಆಗಸ್ಟ್ 1907ನೆ ಇಸವಿ.

ಇದರಿಂದ ಸಮಸ್ತ ಜನರಿಗೂ ತಿಳಿಯಪಡಿಸುವದೇನಂದರೆ :—ಮೈಸೂರು ಸರಕಾರದ ಶ್ರೀಗಂಧದ ಸಾಲಿಯಾನಾ ನಡಿಯತಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಆದರದರ ಬಾಜೂದಲ್ಲಿ ನಮೂದಿರುವ ತಾರೀಖುಗಳಲ್ಲಿ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮಿಷನರವರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಆಫಿಸರು ಮತ್ತು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವದು :—

ಡಿಸ್ಟ್ರಿಕ್ಟ್.	ಕೋಠಿ.	ಹರಾಜು ತಾರೀಖು.	ಸುಮಾರು ಪೌತ್ತ.
			ಟ್ಯಗಳು.
ಶಿವಮೊಗ್ಗ ...	ತೀರ್ಥಹಳ್ಳಿ ..	18ನೆ ನವಂಬರ್ 1907 ...	200
ಡಿಟೋ ...	ಸಾಗರ ...	21ನೆ ಡಿಟೋ ..	150
ಡಿಟೋ ...	ಶಿವಮೊಗ್ಗ ...	25ನೆ ಡಿಟೋ ...	500
ಕಡೂರು ..	ತರೀಕೆರೆ ...	28ನೆ ಡಿಟೋ ...	250
ಡಿಟೋ ..	ಚಿಕ್ಕಮಗಳೂರು ..	2ನೆ ಡಿಸಂಬರ್ 1907 ..	350
ಹಾಸನ ..	ಹಾಸನ ...	5ನೆ ಡಿಟೋ ..	150
ಬೆಂಗಳೂರು ..	ಬೆಂಗಳೂರು ...	9ನೆ ಡಿಟೋ ..	100
ಮೈಸೂರು ..	ಶ್ರೀರಂಗಪಟ್ಟಣ ...	12ನೆ ಡಿಟೋ ..	250
ಡಿಟೋ ...	ಹುಣಸೂರು ..	16ನೆ ಡಿಟೋ ..	500
		ಜುಮ್ಲಾ ..	2,450

2. ಪ್ರತಿ ಕೋಠಿಯಲ್ಲಿಯೂ ಹರಾಜಾಗುವ ಕ್ಲಾಸುವಾರು ಲಾಟು, ಪೌತ್ತ ಮತ್ತು ಇತರ ತಪಶೀಲುಗಳು ಬರುವ ಅಕ್ಟೋಬರ್ ಮಾಹೆಯು ಆಖೈರುನಲ್ಲಿ ತಿಳಿಯಪಡಿಸುತ್ತೆ.

ಎಂ. ಮುತ್ತಣ್ಣ,
ಕಂಸರ್ವೇಟರ್ ಆಫ್ ಫಾರೆಸ್ಟ್ಸ್, ಇಂ ಮೈಸೂರು.